ಬೀದರ್‌ನಲ್ಲಿ ಮಹಿಳಾ ಕಾಲೇಜ್ ಸ್ಥಾಪನೆ

1432(1465); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ

ಅ) ರಾಜ್ಯದ 24 ಜಿಲ್ಲೆಗಳಲ್ಲಿ ಅದರಲ್ಲೂ ವಿಶೇಷವಾಗಿ ಶೈಕ್ಷಣಿಕವಾಗಿ ಹಿಂದುಳಿದ ಪ್ರದೇಶಗಳಲ್ಲಿ ಪ್ರತ್ಯೇಕ ಮಹಿಳಾ ಕಾಲೇಜುಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಆ ಜಿಲ್ಲೆಗಳು ಯಾವುವು?

ಆ) ಶೈಕ್ಷಣಿಕವಾಗಿ ಹಿಂದುಳಿದಿರುವ ಬೀದರ್ ನಗರದಲ್ಲಿ ಮಹಿಳಾ ಕಾಲೇಜು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಇಲ್ಲದಿದ್ದಲ್ಲಿ, ಕಾರಣಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ರಾಜ್ಯದ ತುಮಕೂರು, ಪಾವಗಡ, ದೊಡ್ಡಬಳ್ಳಾಪುರ, ಚಾಮರಾಜಪೇಟೆ(ಬೆಂಗಳೂರುನಗರ), ಚಾಮರಾಜನಗರ, ಮಡಿಕೇರಿ, ಪುತ್ತೂರು, ಚಿತ್ರದುರ್ಗ, ಶಿವಮೊಗ್ಗ, ಚಿಕ್ಕಮಗಳೂರು, ಬಾಗಲಕೋಟೆ, ಬೆಳಗಾವಿ, ಬಿಜಾಪುರ, ಧಾರವಾಡ, ಗದಗ, ಹಾವೇರಿ, ಕಾರವಾರ, ಬಳ್ಳಾರಿ, ಬೀದರ್, ಯಾದಗಿರಿ, ಸಿಂಧನೂರು, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಮಹಿಳಾ ಕಾಲೇಜುಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ.

ಆ) ಬೀದರ್ ನಗರದಲ್ಲಿ ಮಹಿಳಾ ಕಾಲೇಜನ್ನು 2014–15ನೇ ಸಾಲಿನಿಂದ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ.

ಇ) ಉದ್ಭವಿಸುವುದಿಲ್ಲ.